ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಮಂಜೂರಾಗಿರುವ ಹುದ್ದೆಗಳ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

336(462) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು; ಎಷ್ಟು ಹುದ್ದೆಗಳು ಖಾಲಿ ಇವೆ; (ಹುದ್ದೆವಾರು ಸಂಪೂರ್ಣ ವಿವರ ನೀಡುವುದು)

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವಿವಿಧ ಇಲಾಖೆ/ನಿಗಮ/ಮಂಡಳಿಗಳ ನೌಕರರ ಸೇವೆಯನ್ನು ವಿಲೀನಗೊಳಿಸಲಾಗಿದೆಯೇ; (ಹುದ್ದೆವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ವಿಲೀನ ಪ್ರಕ್ರಿಯೆಯಲ್ಲಿ ಅನುಸರಿಸುವ ಮಾನದಂಡಗಳೇನು; (ಪೂರ್ಣ ವಿವರ ನೀಡುವುದು)

(ಈ) ವಿವಿಧ ಇಲಾಖೆ/ನಿಗಮ/ಮಂಡಳಿಗಳ ಎಷ್ಟು ಜನ ನೌಕರರನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿಯೋಜಿಸಲಾಗಿದೆ; (ಹುದ್ದೆವಾರು/ಇಲಾಖೆವಾರು ವಿವರ ನೀಡುವುದು) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು?